**ಕರ್ನಾಟಕ ಸರ್ಕಾರ**

ಸಂಖ್ಯೆ: ಪಪೂಶಿ/ಸಿಬ್ಬಂದಿ-3/ಹೊಕಾಅ 01/2016-17

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ,
ಮಲ್ಲೇಶ್ವರ, ಬೆಂಗಳೂರು-12,
ದಿನಾಂಕ: 16-01-2017.

**ಜ್ಞಾಪನ**

ವಿಷಯ: 2017-18ನೇ ಶೈಕ್ಷಣಿಕ ಸಾಲಿನಲ್ಲಿ ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸುವ ಕುರಿತು.

ಉಲ್ಲೇಖ: 1. ಪದವಿ ಪೂರ್ವ ಶಿಕ್ಷಣ ನಿಯಮಗಳು 2006.

2. ಕರ್ನಾಟಕ ನಾಗರಿಕ ಸೇವೆಗಳ ಖಾತರಿ ವಿಧೇಯಕ 2011ರ ತಿದ್ದುಪಡಿ ಅಧಿಸೂಚನೆ ಸಂಖ್ಯೆ ಸಿಆಸುಇ 13 ಇಕಾಅ 2012 ದಿನಾಂಕ 21-04-2012.

* * * *

1) ಪದವಿ ಪೂರ್ವ ಶಿಕ್ಷಣ ನಿಯಮಗಳು 2006ರ ನಿಯಮ 4ರ ಅನ್ವಯ 2017-18ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದಲ್ಲಿ ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಇಚ್ಛಿಸುವ ಖಾಸಗಿ ಅರ್ಹ ಶಿಕ್ಷಣ ಸಂಸ್ಥೆಗಳಿಗೆ / ಟ್ರಸ್ಟ್‌ಗಳಿಗೆ ಅವಕಾಶ ಕಲ್ಪಿಸಬೇಕಾಗಿದೆ.

2) ಈ ನಿಟ್ಟಿನಲ್ಲಿ ಮೊದಲ ಕ್ರಮವಾಗಿ ಖಾಸಗಿ ಶಿಕ್ಷಣ ಸಂಸ್ಥೆಗಳಿಂದ / ಟ್ರಸ್ಟ್‌ಗಳಿಂದ ಆನ್‌ಲೈನ್ ಅರ್ಜಿಗಳನ್ನು ಆಹ್ವಾನಿಸಿ ಪ್ರಕಟಣೆ ಸಿದ್ಧಪಡಿಸಲಾಗಿದೆ. ಸದರಿ ಪ್ರಕಟಣೆಯ **10** ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಪ್ರಕಟಣೆಯ ಪ್ರತಿಗಳನ್ನು ಆಯಾ ಜಿಲ್ಲೆಯ ವಾರ್ತಾ ಮತ್ತು ಪ್ರಚಾರ ಅಧಿಕಾರಿಗಳಿಗೆ ತಲುಪಿಸಿ, ಸದರಿ ಪ್ರಕಟಣೆಯನ್ನು ಜಿಲ್ಲಾ ಮಟ್ಟದ ಪತ್ರಿಕೆಗಳಲ್ಲಿ ದಿನಾಂಕ:21-01-2017 ರೊಳಗಾಗಿ "ಸುದ್ದಿ ರೂಪದಲ್ಲಿ" ಪ್ರಕಟಿಸುವಂತೆ ಕೋರುವುದು.

3) 2017-18ನೇ ಶೈಕ್ಷಣಿಕ ಸಾಲಿನಲ್ಲಿ ಆಯಾ ಜಿಲ್ಲೆಯಲ್ಲಿ ಪ್ರಾರಂಭಿಸಲು ಉದ್ದೇಶಿಸಿರುವ ಖಾಸಗಿ ಪದವಿ ಪೂರ್ವ ಕಾಲೇಜುಗಳು ನಿಯಮಗಳನ್ವಯ ಅರ್ಹತೆ ಹೊಂದಿರುವ ಕುರಿತು ಪರಿಶೀಲಿಸಿ ವರದಿ ನೀಡಲು, ಪದವಿ ಪೂರ್ವ ಶಿಕ್ಷಣ ನಿಯಮಗಳು 2006ರ ನಿಯಮ 2(7) ರಂತೆ ಕೂಡಲೇ ತಪಾಸಣಾ ಸಮಿತಿ (Inspection Committee) ರಚಿಸಿ (ಈ ಜ್ಞಾಪನದ ಕಂಡಿಕೆ 4 ಮತ್ತು 5 ರಂತೆ) ದಿನಾಂಕ 07-02-2017 ರೊಳಗೆ ನಿರ್ದೇಶಕರ ಅನುಮೋದನೆ ಪಡೆದುಕೊಳ್ಳಲು ತಪಾಸಣಾ ಸಮಿತಿ ಸದಸ್ಯರ ವಿವರಗಳ ಪಟ್ಟಿಯನ್ನು ಜಂಟಿ ನಿರ್ದೇಶಕರು (ಮಾನ್ಯತೆ ಮತ್ತು ಅನುದಾನ) ಇವರ ಹೆಸರಿಗೆ ಕಳುಹಿಸಲು ಸೂಚಿಸಿದೆ.

4) ಪದವಿ ಪೂರ್ವ ಶಿಕ್ಷಣ ನಿಯಮಗಳು 2006ರ ನಿಯಮ 2(7) ರಂತೆ ಪ್ರತಿ ಸಮಿತಿಗೆ ಆಯಾ ಜಿಲ್ಲೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಅತ್ಯಂತ ಹಿರಿಯ ಪ್ರಿನ್ಸಿಪಾಲರಾಗಿರುವ ಒಬ್ಬರನ್ನು ತಪಾಸಣಾ ಸಮಿತಿಯ ಅಧ್ಯಕ್ಷರೆಂದು (ಚೇರ್ ಪರ್ಸ್‌ನ್) ಮತ್ತು ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಅತ್ಯಂತ ಹಿರಿಯ **ಅನುಮೋದಿತ** ಪೂರ್ಣಕಾಲಿಕ ಪ್ರಿನ್ಸಿಪಾಲರಾಗಿರುವ ಒಬ್ಬರನ್ನು ಸದಸ್ಯರೆಂದು ಜಿಲ್ಲಾ ಉಪ ನಿರ್ದೇಶಕರು ನಾಮಕರಣ ಮಾಡಬಹುದಾಗಿದೆ. ಈ ಇಬ್ಬರಲ್ಲಿ ಒಬ್ಬರು ವಿಜ್ಞಾನ ಬೋಧನಾ ವಿಭಾಗಕ್ಕೆ ಸೇರಿದವರಾಗಿರಬೇಕು.

5) ಇತ್ತೀಚಿನ ವರ್ಷಗಳಲ್ಲಿ ಪ್ರತಿಯೊಂದು ಜಿಲ್ಲೆಯಲ್ಲಿ ಖಾಸಗಿ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಹೆಚ್ಚಿನ ಸಂಖ್ಯೆಯ ಅರ್ಜಿಗಳು ಸಲ್ಲಿಸಲ್ಪಟ್ಟಿರುವುದು ಇಲಾಖೆಯ ದಾಖಲೆಗಳಿಂದ ಕಂಡುಬರುತ್ತದೆ. ಕೆಲವು ಜಿಲ್ಲೆಗಳಲ್ಲಿ ಪ್ರತಿ ವರ್ಷ ಸಲ್ಲಿಸಿರುವ ಅರ್ಜಿಗಳ ಸಂಖ್ಯೆ 50ಕ್ಕಿಂತ ಹೆಚ್ಚಾಗಿರುತ್ತದೆ. ಇಂತಹ ಸಂದರ್ಭಗಳಲ್ಲಿ ಕಾಲೇಜುಗಳನ್ನು ಪರಿಶೀಲಿಸಲು ರಚನೆಯಾಗಿರುವ ಒಂದು ತಪಾಸಣಾ ಸಮಿತಿಯಿಂದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ತಪಾಸಣಾ ಕಾರ್ಯವನ್ನು ನಿಗದಿತ ಅವಧಿಯಲ್ಲಿ ಅಂದರೆ ಸುಮಾರು 10-15 ದಿನಗಳಲ್ಲಿ ಪೂರ್ಣಗೊಳಿಸಿ ವರದಿ ಸಲ್ಲಿಸುವುದು ಕಷ್ಟಸಾಧ್ಯವಾಗಿರುವುದನ್ನು ಗಮನಿಸಲಾಗಿದೆ. ಆದ್ದರಿಂದ ಪ್ರತಿ **10** (ಹತ್ತು) ಪದವಿ ಪೂರ್ವ ಕಾಲೇಜುಗಳಿಗೆ **ಒಂದು** ತಪಾಸಣಾ ಸಮಿತಿಯನ್ನು ನೇಮಿಸುವುದು ಸೂಕ್ತವೆಂದು ಕಂಡುಬರುತ್ತದೆ. ಈ ನಿಟ್ಟಿನಲ್ಲಿ ಕಳೆದ ಕೆಲವು ವರ್ಷಗಳಲ್ಲಿ ಆಯಾ ಜಿಲ್ಲೆಯಲ್ಲಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಸಲ್ಲಿಸಿರುವ ಅರ್ಜಿಗಳ ಸಂಖ್ಯೆಯನ್ನು ಆಧರಿಸಿ, ಪ್ರತಿ **10** ಪದವಿ ಪೂರ್ವ ಕಾಲೇಜುಗಳಿಗೆ **ಒಂದು** ತಪಾಸಣಾ ಸಮಿತಿಯಂತೆ ಅಗತ್ಯ ತಪಾಸಣಾ ಸಮಿತಿಗಳನ್ನು ರಚಿಸಲು ಈ ಮೂಲಕ ಸೂಚಿಸಿದೆ.

ಜಂಟಿ ನಿರ್ದೇಶಕರು,
(ಮಾನ್ಯತೆ ಮತ್ತು ಅನುದಾನ)
ಪದವಿ ಪೂರ್ವ ಶಿಕ್ಷಣ ಇಲಾಖೆ.

ಗೆ,

ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪ ನಿರ್ದೇಶಕರಿಗೆ.

ಪ್ರತಿಗಳು:-

1. ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳು ಮತ್ತು ಸಂಬಂಧಿಸಿದ ಸಿಬ್ಬಂದಿಗೆ.
2. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಪಪೂಶಿಇ - ಇವರಿಗೆ ಇಲಾಖಾ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು.
3. ಹೆಚ್ಚುವರಿ ಪ್ರತಿ.

ಕರ್ನಾಟಕ ಸರ್ಕಾರ

ಸಂಖ್ಯೆ: ಪಪೂಶಿ/ಸಿಬ್ಬಂದಿ-3/ಹೊಕಾಳ 01/2016-17

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ,
ಮಲ್ಲೇಶ್ವರ, ಬೆಂಗಳೂರು-12,
ದಿನಾಂಕ: 13-01-2017

## ಪ್ರಕಟಣೆ

ಪದವಿ ಪೂರ್ವ ಶಿಕ್ಷಣ ನಿಯಮಗಳು 2006ರ ನಿಯಮ 4 ರನ್ವಯ 2017-18ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದಲ್ಲಿ ಖಾಸಗಿ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಇಚ್ಚಿಸುವ ಅರ್ಹ ಖಾಸಗಿ ಶಿಕ್ಷಣ ಸಂಸ್ಥೆಗಳಿಂದ / ಟ್ರಸ್ಟ್‌ಗಳಿಂದ ಅರ್ಜಿಗಳನ್ನು ಆನ್‌ಲೈನ್ ಮೂಲಕ ಆಹ್ವಾನಿಸಲಾಗಿದೆ. ನಿಗದಿತ "ಅರ್ಜಿ ನಮೂನೆ" (Form-I) ರಲ್ಲಿ ದಿನಾಂಕ 31-01-2017ರೊಳಗೆ ಹೆಸರನ್ನು ನೋಂದಾಯಿಸಿಕೊಳ್ಳಲು ಜಂಟಿ ನಿರ್ದೇಶಕರು (ಮಾನ್ಯತೆ ಮತ್ತು ಅನುದಾನ), ಪದವಿ ಪೂರ್ವ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು, ಇವರಿಗೆ ಅರ್ಜಿಯನ್ನು ಸಲ್ಲಿಸುವುದು. ಅನ್ ಲೈನ್ ಅರ್ಜಿ ನಮೂನೆ ಮತ್ತು ಹೆಚ್ಚಿನ ವಿವರಗಳನ್ನು ಇಲಾಖೆಯ ವೆಬ್‌ಸೈಟ್ "www.pue.kar.nic.in" ಇಲ್ಲಿಂದ ಹಾಗೂ ಯಾವುದೇ ಸ್ಪಷ್ಟೀಕರಣ ಬೇಕಾದಲ್ಲಿ ಸಂಬಂಧಿಸಿದ ಜಿಲ್ಲಾ ಉಪ ನಿರ್ದೇಶಕರ ಕಛೇರಿಯಿಂದ ಪಡೆಯಬಹುದು.

ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಿ 2015-16 ಮತ್ತು 2016-17ನೇ ಶೈಕ್ಷಣಿಕ ಸಾಲಿನಲ್ಲಿ ಅರ್ಜಿ ಶುಲ್ಕವನ್ನು ಪಾವತಿಸಿ ಈ ಕಛೇರಿಗೆ ಅರ್ಜಿ ಸಲ್ಲಿಸಿರುವ ಖಾಸಗಿ ಅರ್ಹ ಶಿಕ್ಷಣ ಸಂಸ್ಥೆ / ಟ್ರಸ್ಟ್‌ಗಳು, ಪುನ: ಹೊಸದಾಗಿ 2017-18ನೇ ಶೈಕ್ಷಣಿಕ ಸಾಲಿನಲ್ಲಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು ಮತ್ತೊಮ್ಮೆ ಅರ್ಜಿ ಶುಲ್ಕ ಪಾವತಿಸುವ ಅವಶ್ಯಕತೆ ಇರುವುದಿಲ್ಲ. ಆದರೆ, ಇಂತಹ ಸಂಸ್ಥೆಗಳು 2017-18ನೇ ಶೈಕ್ಷಣಿಕ ಸಾಲಿನಲ್ಲಿ ಖಾಸಗಿ ಅನುದಾನರಹಿತ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು ಇಚ್ಛಿಸಿದ್ದಲ್ಲಿ ಎಲ್ಲಾ ಸಿದ್ದತೆ ಮಾಡಿಕೊಂಡಿರುವ ಬಗ್ಗೆ ಪ್ರಸ್ತುತ ಸಾಲಿನ ವೇಳಾಪಟ್ಟಿಯಂತೆ ಈ ಕಛೇರಿಗೆ ನಿಗದಿತ ಅರ್ಜಿಯೊಂದಿಗೆ ಮನವಿ ಸಲ್ಲಿಸಬಹುದೆಂದು ತಿಳಿಯಪಡಿಸಿದೆ.

ನಿರ್ದೇಶಕರು, 13/1
ಪದವಿ ಪೂರ್ವ ಶಿಕ್ಷಣ ಇಲಾಖೆ.

**2017-18ನೇ ಶೈಕ್ಷಣಿಕ ಸಾಲಿನಲ್ಲಿ ಖಾಸಗಿ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸುವ ಸಂಬಂಧ ಅನುಸರಿಸಬೇಕಾದ ವೇಳಾಪಟ್ಟಿ**

| ಕ್ರ | ಘಟನಾವಳಿಗಳ ವಿವರ | ದಿನಾಂಕ |
|---|---|---|
| 1 | ನೋಂದಾಯಿತ ಅರ್ಹ ಟ್ರಸ್ಟ್ / ಸೊಸೈಟಿಗಳಿಂದ ರಾಜ್ಯದಲ್ಲಿ ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಅರ್ಜಿಗಳನ್ನು ಆಹ್ವಾನಿಸಿ ಪ್ರಕಟಣೆ ನೀಡಲು ಪ್ರಕಟಣೆಯನ್ನು ಸಿದ್ಧಪಡಿಸುವುದು. | 16-01-2017 |
| 2 | ಪ್ರಕಟಣೆಯ ಪ್ರತಿಯನ್ನು ರಾಜ್ಯದ ಪ್ರಮುಖ ದಿನಪತ್ರಿಕೆಗಳಲ್ಲಿ ಮತ್ತು ಜಿಲ್ಲಾ ಮಟ್ಟದ ಪತ್ರಿಕೆಗಳಲ್ಲಿ ಸಾರ್ವಜನಿಕ ಹಿತಾಸಕ್ತಿಯ ರೂಪದಲ್ಲಿ ಪ್ರಕಟಿಸುವಂತೆ ಕೋರಿ ರಾಜ್ಯ ವಾರ್ತಾ ಮತ್ತು ಪ್ರಚಾರ ಇಲಾಖೆಯ ನಿರ್ದೇಶಕರು ಹಾಗೂ ಜಿಲ್ಲಾ ಮತ್ತು ವಾರ್ತಾ ಪ್ರಚಾರ ಇಲಾಖೆಯ ಅಧಿಕಾರಿಗಳನ್ನು ಕೋರುವುದು. | 16-01-2017 |
| 3 | ನೋಂದಾಯಿತ ಅರ್ಹ ಟ್ರಸ್ಟ್ / ಸೊಸೈಟಿಗಳಿಂದ ರಾಜ್ಯದಲ್ಲಿ ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಆನ್‌ಲೈನ್ ಅರ್ಜಿಗಳನ್ನು ಆಹ್ವಾನಿಸಿ ನೀಡಿರುವ ಪ್ರಕಟಣೆಯನ್ನು ಪತ್ರಿಕೆಗಳಲ್ಲಿ ಪ್ರಕಟಿಸುವ ಕೊನೆಯ ದಿನಾಂಕ. | 21-01-2017 |
| 4 | ಅರ್ಹ ಟ್ರಸ್ಟ್ / ಸಂಸ್ಥೆಯ ಆಡಳಿತ ಮಂಡಳಿಗಳು ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಅರ್ಜಿ ಶುಲ್ಕ ರೂ. 36,000/- ದೊಂದಿಗೆ ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸುವ ಅವಧಿ (Form – I ರಲ್ಲಿ) – (ನಿಯಮ– 4 ರಂತೆ). | 31-01-2017 |
| 5 | ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಿ ಟ್ರಸ್ಟ್ / ಸೊಸೈಟಿಗಳು ಸಲ್ಲಿಸುವ ಅರ್ಜಿಗಳನ್ನು ನಿರ್ದೇಶನಾಲಯದ ರಿಜಿಸ್ಟರ್‌ನಲ್ಲಿ ದಾಖಲಿಸುವ ಅವಧಿ (Form – II) – (ನಿಯಮ – 4 ರಂತೆ). | ಅರ್ಜಿ ಸಲ್ಲಿಸಿದ ದಿನಾಂಕದಿಂದ 05 ದಿನದೊಳಗೆ |
| 6 | ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಅರ್ಜಿ ಸಲ್ಲಿಸಿರುವ ಹಾಗೂ ರಿಜಿಸ್ಟರ್‌ನಲ್ಲಿ ನೋಂದಾಯಿಸಲ್ಪಟ್ಟ ಟ್ರಸ್ಟ್ / ಸೊಸೈಟಿಗಳಿಗೆ ನಿರ್ದೇಶನಾಲಯದಿಂದ Letter of intent ನೀಡಲು ಕೊನೆಯ ದಿನಾಂಕ (ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ 05 ದಿನದೊಳಗೆ). | 06-02-2017 |
| 7 | ಜಿಲ್ಲಾ ಉಪ ನಿರ್ದೇಶಕರು, ಜಿಲ್ಲಾ ಮಟ್ಟದ ತಪಾಸಣಾ ಸಮಿತಿಯನ್ನು ರಚಿಸಿ ನಿರ್ದೇಶನಾಲಯದ ಅನುಮೋದನೆ ಪಡೆಯುವ ಕೊನೆಯ ದಿನಾಂಕ (ಪದವಿ ಪೂರ್ವ ಶಿಕ್ಷಣ ನಿಯಮಗಳು 2006ರ ನಿಯಮ – 2(7) ರಂತೆ ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸುವ ಬಗ್ಗೆ ಅರ್ಜಿ ಸಲ್ಲಿಸುವ ಟ್ರಸ್ಟ್ / ಸೊಸೈಟಿಗಳ ಉದ್ದೇಶಿತ ಕಾಲೇಜಿನ ಸ್ಥಳ ಪರಿಶೀಲನೆ ನಡೆಸಿ ವರದಿ ಸಲ್ಲಿಸಲು) | 07-02-2017 |
| 8 | ಜಿಲ್ಲಾ ಮಟ್ಟದ ತಪಾಸಣಾ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರಿಗೆ ತಪಾಸಣಾ ಮಾರ್ಗಸೂಚಿಗಳ ಬಗ್ಗೆ ತಿಳುವಳಿಕೆ ನೀಡುವ ಕಾರ್ಯಾಗಾರದ ಸಭೆ ದಿನಾಂಕ. | 13-02-2017 |

| | | |
|---|---|---|
| 9 | ನಿರ್ದೇಶನಾಲಯವು ನೀಡಿರುವ Letter of intentಗೆ ಆಡಳಿತ ಮಂಡಳಿಯವರು 2017-18ನೇ ಶೈಕ್ಷಣಿಕ ಸಾಲಿನಲ್ಲಿಯೇ ಖಾಸಗಿ ಪದವಿ ಪೂರ್ವ ಕಾಲೇಜನ್ನು ಪ್ರಾರಂಭಿಸಲು ಉದ್ದೇಶಿಸಿ ನಿಯಮ – 4ರಂತೆ ಸಿದ್ದತೆ ಮಾಡಿಕೊಂಡಿರುವ ಬಗ್ಗೆ ಅಗತ್ಯ ದಾಖಲೆಗಳೊಂದಿಗೆ ನಿಗದಿತ ನಮೂನೆಯೊಂದಿಗೆ ಪ್ರಸ್ತಾವನೆಯನ್ನು ನಿರ್ದೇಶನಾಲಯಕ್ಕೆ ತಲುಪಿಸುವ ಕೊನೆಯ ದಿನಾಂಕ | 20-02-2017 |
| 10 | 2017-18ನೇ ಸಾಲಿನಲ್ಲಿಯೇ ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಿ ಪ್ರಸ್ತಾವನೆ ಸಲ್ಲಿಸಿರುವ ಟ್ರಸ್ಟ್ / ಸಂಸ್ಥೆಯ ಉದ್ದೇಶಿತ ಕಾಲೇಜಿನ ಸ್ಥಳ ಪರಿಶೀಲನೆ ನಡೆಸಲು ಜಿಲ್ಲಾ ತಪಾಸಣಾ ಸಮಿತಿಗೆ, ಜಿಲ್ಲಾ ಉಪ ನಿರ್ದೇಶಕರ ಮುಖಾಂತರ ನಿರ್ದೇಶನ ನೀಡುವ ಕೊನೆಯ ದಿನಾಂಕ (ಟ್ರಸ್ಟ್ / ಸಂಸ್ಥೆಯು ಪ್ರಸ್ತಾವನೆ ಸಲ್ಲಿಸಿದ 05 ದಿನಗಳ ಒಳಗೆ) | 23-02-2017 |
| 11 | ಜಿಲ್ಲಾ ತಪಾಸಣಾ ಸಮಿತಿಯು ಉದ್ದೇಶಿತ ಕಾಲೇಜುಗಳ ಸ್ಥಳ ಪರಿಶೀಲನೆ ನಡೆಸಿ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ ವರದಿ ಸಲ್ಲಿಸುವ ಕೊನೆಯ ದಿನಾಂಕ (ನಿರ್ದೇಶನಾಲಯವು ಈ ಕುರಿತು ನಿರ್ದೇಶನ ನೀಡಿದ 20 ದಿನಗಳೊಳಗೆ) (ಪ್ರತಿ 10 ಕಾಲೇಜುಗಳಿಗೆ ಒಂದು ತಪಾಸಣಾ ಸಮಿತಿ ರಚಿಸಬೇಕು)<br>1) ನಿರ್ದೇಶನ ನೀಡಿದ 15 ದಿನಗಳ ಒಳಗಾಗಿ ಸ್ಥಳ ಪರಿಶೀಲನೆ ನಡೆಸಿ, ತಪಾಸಣಾ ಸಮಿತಿಯು ವರದಿಯನ್ನು ದಾಖಲೆಗಳೊಂದಿಗೆ ಜಿಲ್ಲಾ ಉಪ ನಿರ್ದೇಶಕರಿಗೆ ಸಲ್ಲಿಸುವುದು.<br>2) ತಪಾಸಣಾ ಸಮಿತಿಯು ನೀಡುವ ವರದಿಯನ್ನು ಜಿಲ್ಲಾ ಉಪ ನಿರ್ದೇಶಕರು ಮುಂದಿನ 05 ದಿನಗಳ ಒಳಗಾಗಿ ನಿರ್ದೇಶನಾಲಯಕ್ಕೆ ತಲುಪಿಸುವುದು. | 17-03-2017 |
| 12 | ಜಿಲ್ಲಾ ತಪಾಸಣಾ ಸಮಿತಿ ಸಲ್ಲಿಸುವ ಪ್ರಸ್ತಾವನೆಗಳನ್ನು ನಿಯಮಗಳನ್ವಯ ಪರಿಶೀಲಿಸಿ ಟ್ರಸ್ಟ್ / ಸೊಸೈಟಿಗಳಿಗೆ ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸುವ ಕೋರಿಕೆಯನ್ನು ಪರಿಗಣಿಸುವಂತೆ / ತಿರಸ್ಕರಿಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಕೊನೆಯ ದಿನಾಂಕ (ಜಿಲ್ಲಾ ತಪಾಸಣಾ ಸಮಿತಿಯು ನಿರ್ದೇಶನಾಲಯಕ್ಕೆ ವರದಿ ಸಲ್ಲಿಸಿದ 15 ಕೆಲಸದ ದಿನಗಳೊಳಗೆ) | 03-04-2017 |
| 13 | ಸರ್ಕಾರವು ಕಾಲೇಜು ಮಂಜೂರಾತಿ ನೀಡಿ / ಕಾಲೇಜು ಮಂಜೂರಾತಿ ತಿರಸ್ಕರಿಸಿ ಆದೇಶ ಹೊರಡಿಸುವ ಕೊನೆಯ ದಿನಾಂಕ (ನಿರ್ದೇಶನಾಲಯವು ಪ್ರಸ್ತಾವನೆ ಸಲ್ಲಿಸಿದ 30 ದಿನಗಳೊಳಗೆ) (ನಿರ್ದೇಶನಾಲಯವು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದ 30 ದಿನಗಳೊಳಗೆ) | 03-05-2017 |
| 14 | ಸರ್ಕಾರವು ಕಾಲೇಜು ಮಂಜೂರಾತಿ ನೀಡಿ / ಕಾಲೇಜು ಮಂಜೂರಾತಿ ತಿರಸ್ಕರಿಸಿ ಹೊರಡಿಸುವ ಆದೇಶಗಳನ್ನು ಪದವಿ ಪೂರ್ವ ಶಿಕ್ಷಣ ನಿರ್ದೇಶನಾಲಯಕ್ಕೆ ಕಳುಹಿಸುವ ಕೊನೆಯ ದಿನಾಂಕ | 06-05-2017 |
| 15 | ಸರ್ಕಾರವು ಮಂಜೂರು ಮಾಡಿರುವ ಪದವಿ ಪೂರ್ವ ಕಾಲೇಜುಗಳಿಗೆ 2017-18ನೇ ಶೈಕ್ಷಣಿಕ ಸಾಲಿನಲ್ಲಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಪ್ರಥಮ ಶೈಕ್ಷಣಿಕ ಮಾನ್ಯತೆ ಪಡೆದುಕೊಳ್ಳಲು ಸದರಿ ಸಂಸ್ಥೆ / ಟ್ರಸ್ಟ್‌ಗೆ ಹಾಗೂ ಜಿಲ್ಲಾ ಉಪ ನಿರ್ದೇಶಕರಿಗೆ ತಿಳಿಸುವ ಕೊನೆಯ ದಿನಾಂಕ (ಸರ್ಕಾರದ ಆದೇಶವು ಈ ಕಛೇರಿಗೆ ತಲುಪಿದ 10 ದಿನಗಳೊಳಗೆ) | 16-05-2017 |

| | | |
|---|---|---|
| 16 | ಜಿಲ್ಲಾ ಉಪ ನಿರ್ದೇಶಕರು ಸರ್ಕಾರವು ಮಂಜೂರಾತಿ ನೀಡಿರುವ ಪದವಿ ಪೂರ್ವ ಕಾಲೇಜಿನ ಸ್ಥಳ ಪರಿಶೀಲನೆ ನಡೆಸಿ ನಿಯಮಗಳನ್ವಯ 2017-18ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಶೈಕ್ಷಣಿಕ ಮಾನ್ಯತೆ ನೀಡಲು (ಕಾಲೇಜಿನಲ್ಲಿ ಮೂಲಭೂತ ಸೌಲಭ್ಯಗಳಿರುವ ಬಗ್ಗೆ ಹಾಗೂ ಬೋಧಿಸಲು ಅವಕಾಶವಿರುವ ಭಾಷೆ / ವಿಷಯಗಳು / ಸಂಯೋಜನೆಗಳು / ವಿಭಾಗಗಳ ಮಾಹಿತಿಯೊಂದಿಗೆ – ಟ್ರಸ್ಟ್ / ಸಂಸ್ಥೆಯಿಂದ ನಿಗದಿತ ಶುಲ್ಕಗಳನ್ನು ಪಾವತಿಸಿರುವ ಮೂಲ ಚಲನ್‌ಗಳು ಮತ್ತು ಸ್ಥಿರನಿಧಿ ಠೇವಣಿ ಪತ್ರದೊಂದಿಗೆ ಹಾಗೂ ಅಗತ್ಯ ಪ್ರಮಾಣ ಪತ್ರಗಳೊಂದಿಗೆ) ನಿಗದಿಪಡಿಸಿರುವ ಚೆಕ್‌ಲಿಸ್ಟ್‌ನಲ್ಲಿ (ಚೆಕ್‌ಲಿಸ್ಟ್ ನಮೂನೆ – 6 ರಲ್ಲಿ) ಪ್ರಸ್ತಾವನೆ ಸಲ್ಲಿಸಲು ಕೊನೆಯ ದಿನಾಂಕ (ನಿರ್ದೇಶನಾಲಯದಿಂದ ಸೂಚನೆ ಬಂದ 10 ದಿನಗಳ ಒಳಗೆ) | 26-05-2017 |
| 17 | ಜಿಲ್ಲಾ ಉಪ ನಿರ್ದೇಶಕರು ಸಲ್ಲಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಮಂಜೂರು ಮಾಡಿರುವ ಪದವಿ ಪೂರ್ವ ಕಾಲೇಜಿಗೆ 2017-18ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಶೈಕ್ಷಣಿಕ ಮಾನ್ಯತೆಯನ್ನು ನಿರ್ದೇಶನಾಲಯದಿಂದ ನೀಡುವ ಕೊನೆಯ ದಿನಾಂಕ (ಜಿಲ್ಲಾ ಉಪ ನಿರ್ದೇಶಕರು ಪ್ರಸ್ತಾವನೆ ಸಲ್ಲಿಸಿದ 20 ದಿನಗಳ ಒಳಗೆ) | 10-06-2017 |
| 18 | ಪ್ರಥಮ ಶೈಕ್ಷಣಿಕ ಮಾನ್ಯತೆ ಪಡೆದ ಖಾಸಗಿ ಪದವಿ ಪೂರ್ವ ಕಾಲೇಜುಗಳು 2017-18ನೇ ಶೈಕ್ಷಣಿಕ ಸಾಲಿನಲ್ಲಿ ಪ್ರಥಮ ಪಿಯುಸಿ ತರಗತಿಗಳನ್ನು ಪ್ರಾರಂಭಿಸಲು ದಾಖಲಾತಿ ಪ್ರಕ್ರಿಯೆ ಪ್ರಾರಂಭಿಸುವ ದಿನಾಂಕ (ಪ್ರಥಮ ಶೈಕ್ಷಣಿಕ ಮಾನ್ಯತೆ ನೀಡಿದ ನಂತರದಲ್ಲಿ) | ದಾಖಲಾತಿ ಸುತ್ತೋಲೆ ಅನುಸಾರ |

12/1

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.